ಕರ್ನಾಟಕ ಸರ್ಕಾರ

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.**

ಸಂಖ್ಯೆ: ಸಿ1/SSLC/ಮಾ.ಏ.2020.ಪ.ವೇ.ಪ/37/2019-20 ದಿನಾಂಕ: 23.03.2020

## ಸುತ್ತೋಲೆ

ವಿಷಯ: ಮಾರ್ಚ್/ಏಪ್ರಿಲ್-2020ರ ಎಸ್.ಎಸ್.ಎಲ್.ಸಿ. ಪರೀಕ್ಷೆಯ ವೇಳಾಪಟ್ಟಿಯ ಬಗ್ಗೆ ಸುಳ್ಳು ವದಂತಿ ಹಬ್ಬಿಸುತ್ತಿರುವ ಬಗ್ಗೆ.

*****

ಮಾರ್ಚ್/ಏಪ್ರಿಲ್-2020ರ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ರಾಜ್ಯದಲ್ಲಿ ಕೊರೋನಾ ವೈರಸ್ ಹರಡುತ್ತಿರುವ ಹಿನ್ನಲೆಯಲ್ಲಿ ದಿನಾಂಕ: 27.03.2020 ರಿಂದ 09.04.2020ರವರೆಗೆ ನಡೆಯಬೇಕಾಗಿದ್ದ ಪರೀಕ್ಷೆಯನ್ನು ಮುಂದೂಡಲಾಗಿದೆ. ಆದರೆ ಕೆಲವು ಕಿಡಿಗೇಡಿಗಳು ಸುಳ್ಳು ಪರಿಷ್ಕೃತ ಪರೀಕ್ಷೆಯ ದಿನಾಂಕವನ್ನು ವಾಟ್ಸ್ಯಾಪ್ ಮೂಲಕ ಹರಿಬಿಟ್ಟಿರುವುದು ಮಂಡಳಿಯ ಗಮನಕ್ಕೆ ಬಂದಿರುತ್ತದೆ.

ಮಾರ್ಚ್/ಏಪ್ರಿಲ್-2020ರ ಎಸ್.ಎಸ್.ಎಲ್.ಸಿ. ಪರೀಕ್ಷಾ ದಿನಾಂಕದ ಬಗ್ಗೆ ಸರ್ಕಾರದ ಆದೇಶದಂತೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಮುಂದಿನ ಪರಿಷ್ಕೃತ ವೇಳಾಪಟ್ಟಿಯನ್ನು ಮುಂದಿನ ದಿನಗಳಲ್ಲಿ ಅಧಿಕೃತವಾಗಿ ಪ್ರಕಟಿಸಲಾಗುವುದು. ಈ ಹಿನ್ನಲೆಯಲ್ಲಿ ವಿದ್ಯಾರ್ಥಿಗಳು ಮತ್ತು ಪೋಷಕರು ಈ ಸುಳ್ಳು ವದಂತಿಗಳ ಬಗ್ಗೆ ಗಮನವಹಿಸದೇ, ವಿದ್ಯಾರ್ಥಿಗಳು ಅಭ್ಯಾಸದ ಕಡೆ ಗಮನಹರಿಸುವಂತೆ ಈ ಮೂಲಕ ತಿಳಿಸಿದೆ.

(ವಿ.ಸುಮಂಗಲ)
ನಿರ್ದೇಶಕರು (ಪರೀಕ್ಷೆಗಳು) 23/3

ಗೆ:

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳಿಗೆ ಸಂಬಂಧಪಟ್ಟ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ.